ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನರಸಿಂಹರಾಜ ಕ್ಷೇತ್ರದ ರಾಘವೇಂದ್ರ ಬಡಾವಣೆ (ಹಿರಿಯ ಬೋವಿಪಾಳ್ಯ)ಯಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದು ಇದುವರೆವಿಗೂ ಕಟ್ಟಡದ ಕಾಮಗಾರಿ ಪ್ರಾರಂಭವಾಗಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಕಟ್ಟಡದ ನಿರ್ಮಾಣದ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಮಾಲೀಕಯ್ಯ ವಿ.ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):

ಅ) ಹೌದು.

ಆ) ಸದರಿ ನಿವೇಶನದ ತಕರಾರು ನಿಮಿತ್ತ ಕಟ್ಟಡ ನಿರ್ಮಾಣವನ್ನು ಪ್ರಾರಂಭಿಸಿಲ್ಲ. ಪ್ರತಿಯಾಗಿ ಕಟ್ಟಡ ನಿರ್ಮಾಣವನ್ನು ಮೆಟ್ರಿಕ್‌ನಂತರದ ಬಾಲಕರ ವಿದ್ಯಾರ್ಥಿನಿಲಯದ ಸ್ವಂತ ಕಟ್ಟಡದ ಆವರಣದಲ್ಲಿ ನಿರ್ಮಿಸಲಾಗುತ್ತಿದೆ

ಸಮಾಜ ಕಲ್ಯಾಣ ಇಲಾಖೆಯಲ್ಲಿ ವಿದ್ಯಾರ್ಥಿನಿಲಯಗಳಲ್ಲಿ ಕೆಲಸ ಮಾಡುವ ನೌಕರರುಗಳಿಗೆ ವಿಶೇಷ ಭತ್ಯೆ ಮಂಜೂರಾತಿ

101 (89)

ಶ್ರೀ ಇ.ಮಾರುತಿರಾವ್ ಪವಾರ್ (ನರಸಿಂಹರಾಜ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಶಿಷ್ಟ ಜಾತಿ/ವರ್ಗದ ವಿದ್ಯಾರ್ಥಿ ನಿಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಡಿಗೆಯವರು, ಅಡಿಗೆ ಸಹಾಯಕರು ರಜಾ ದಿನಗಳಲ್ಲೂ ಕರ್ತವ್ಯ ನಿರ್ವಹಿಸುತ್ತಿದ್ದು ಇವರಿಗೆ ಯಾವುದೇ ವಿಶೇಷ ಭತ್ಯೆ ಅಥವಾ ರಜಾವನ್ನು ಮಂಜೂರು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಸದರಿ ಸಿಬ್ಬಂದಿಯವರಿಗೆ ರಜಾ ಅಥವಾ ವಿಶೇಷ ಭತ್ಯೆ ನೀಡುವ ಬಗ್ಗೆ ಸರ್ಕಾರದವರು ಪರಿಶೀಲಿಸುವರೆ?

ಶ್ರೀ ಕೆ.ಎಂ.ಕೃಷ್ಣಾರೆಡ್ಡಿ (ಮಾನ್ಯ ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜಾಜಿನಗರದಲ್ಲಿರುವ ಕೈಗಾರಿಕಾ ಗೊದಾಮುಗಳ ಹಂಚಿಕೆ

102 (167)

ಶ್ರೀ ಯು.ಆರ್.ಸಭಾಪತಿ (ಉಡುಪಿ): ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕೈಗಾರಿಕಾ ವಸಾಹತು, ರಾಜಾಜಿನಗರದಲ್ಲಿ ಕೈಗಾರಿಕಾ ಗೋದಾಮುಗಳ ಹಂಚಿಕೆಯ ಬಗ್ಗೆ ಇರುವ ನೀತಿ ನಿಯಮಗಳು ಏನು?

2) ಬೇನಾಮಿ ಹೆಸರುಗಳಲ್ಲಿ ಕೈಗಾರಿಕೆಗಳು ಇಲ್ಲದವರಿಗೆ ಗೋದಾಮುಗಳನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

3) ಹಾಗಿದ್ದಲ್ಲಿ ನೀತಿ ನಿಯಮಗಳನ್ನು ಉಲ್ಲಂಘಿಸಿದವರ ಮೇಲೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಬಿ.ಎ.ಮೊಹಿದ್ದೀನ್ (ಸಣ್ಣ ಕೈಗಾರಿಕೆ ಸಚಿವರು):

1) ಸಾಮಾನ್ಯವಾಗಿ ಗೋಡೋನುಗಳನ್ನು ರಾಜಾಜಿನಗರ ಕೈಗಾರಿಕಾ ವಸಾಹತು ವಿನಲ್ಲಿರುವ ಮಳಿಗೆ ಹಂಚಿಕೆದಾರರಿಗೆ ಕಚ್ಚಾ ಸಾಮಗ್ರಿ ಅಥವಾ ತಯಾರಾದ ಉತ್ಪನ್ನಗಳನ್ನು ದಾಸ್ತಾನಿಸುವ ಸಲುವಾಗಿ ಈ ಕೆಳಕಂಡ ಷರತ್ತುಗಳೊಡನೆ ಹಂಚಿಕೆ ಮಾಡಲಾಗುತ್ತದೆ.

ಅ) ಗೋಡೋನುಗಳನ್ನು ಕಚ್ಚಾ ಸಾಮಗ್ರಿ ಅಥವಾ ತಯಾರಿಸಲಾದ ಉತ್ಪನ್ನಗಳನ್ನು ದಾಸ್ತಾನುಗೊಳಿಸಲು ಉಪಯೋಗಿಸುವುದು.

ಆ) ಹಿಂದೆ, ಮುಂದೆ, ಅಕ್ಕ-ಪಕ್ಕ ಮತ್ತು ಮೇಲೆ ಯಾವುದೇ ರೀತಿಯ ನಿರ್ಮಾಣವನ್ನು ಮಾಡಬಾರದು.

ಇ) ಗೋಡೋನುಗಳನ್ನು ಬಾಡಿಗೆ : ಹೆಚ್.ಪಿ. ಆಧಾರದ ಮೇಲೆ ನೀಡಲಾಗುವುದು.

ಈ) ಕಾಲಕಾಲಕ್ಕೆ ನೀಡಲಾಗುವ ಇತರೆ ನಿಯಮಗಳನ್ನು ಪಾಲಿಸತಕ್ಕದ್ದು.